ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 3-7-2017

# ಪತ್ರಿಕಾ ಪ್ರಕಟಣೆ

## ಎಂಡೋಸಲ್ಫಾನ್ ಸಂತ್ರಸ್ತರ ನೆರವಿಗೆ ಕೇರಳ ಮಾದರಿಯಲ್ಲಿ ಉನ್ನತ ಮಟ್ಟದ ಸಮಿತಿ – ಸಚಿವ ಕೆ.ಆರ್. ರಮೇಶ್‌ಕುಮಾರ್

**ಬೆಂಗಳೂರು, ಜುಲೈ 3 (ಕರ್ನಾಟಕ ವಾರ್ತೆ)**

ರಾಜ್ಯದ ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ ಮತ್ತು ಕೇರಳದ ಗಡಿ ಭಾಗಗಳಲ್ಲಿರುವ ರಾಜ್ಯದ ಎಂಡೋಸಲ್ಫಾನ್ ಸಂತ್ರಸ್ತರ ನೆರವಿಗಾಗಿ ಕೇರಳದ ಮಾದರಿಯಲ್ಲಿಯೇ ಪರಿಹಾರ, ಚಿಕಿತ್ಸಾ ವೆಚ್ಚ ಹಾಗೂ ಇತರೆ ಸೌಲಭ್ಯಗಳನ್ನು ನೀಡಲು ಪರಿಶೀಲಿಸಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಕೆ. ಆರ್. ರಮೇಶ್ ಕುಮಾರ್ ಅವರು ತಿಳಿಸಿದ್ದಾರೆ.

ವಿಧಾನಸೌಧದಲ್ಲಿಂದು ಉನ್ನತ ಅಧಿಕಾರಿಗಳ ಸಭೆಯ ನಂತರ ಸುದ್ಧಿಗಾರರೊಂದಿಗೆ ಮಾತನಾಡಿದ ಅವರು ವಿಧಾನ ಮಂಡಲದಲ್ಲಿ ಈ ವಿಷಯ ಕುರಿತಂತೆ ವಿಸ್ತೃತ ಚರ್ಚೆಯಾಗಿದ್ದು, ಕೇರಳ ಮಾದರಿಯಲ್ಲಿ ಪರಿಹಾರ ನೀಡಬೇಕು ಎಂದು ಸಲಹೆಗಳು ಬಂದ ಹಿನ್ನೆಲೆಯಲ್ಲಿ ಕೇರಳ ಮಾದರಿಯಲ್ಲಿಯೇ ಮುಖ್ಯಮಂತ್ರಿ ಅವರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಮಿತಿ ರಚಿಸಲು ಇಲಾಖೆ ಮುಖ್ಯಮಂತ್ರಿ ಅವರ ಮನವೊಲಿಸುವುದಾಗಿ ಸಚಿವರು ತಿಳಿಸಿದರು. ಸಮಿತಿಯಲ್ಲಿ ಕೃಷಿ, ಸಮಾಜ ಕಲ್ಯಾಣ, ಆರೋಗ್ಯ, ತೋಟಗಾರಿಕೆ ಸೇರಿದಂತೆ ವಿವಿಧ ಇಲಾಖೆಗಳ ಸಚಿವರು ಸದಸ್ಯರುಗಳಾಗಿರುತ್ತಾರೆ ಎಂಡೋಸಲ್ಫಾನ್ ನಿಂದ ಮೃತಪಟ್ಟ ಕುಟುಂಬಗಳಿಗೆ ಹಾಗೂ ಸಂಪೂರ್ಣ ಹಾಸಿಗೆ ಹಿಡಿದವರಿಗೆ 3 ಲಕ್ಷ ರೂ. ಪರಿಹಾರ ನೀಡುವ ಕೇರಳ ಮಾದರಿಯಲ್ಲಿ ನಮೂದಿಸಲಾಗಿದೆ. ಅದೇ ಮಾದರಿಯಲ್ಲಿ ಜಾರಿ ಕುರಿತಂತೆ ಮುಖ್ಯಮಂತ್ರಿ ಅವರೊಂದಿಗೆ ಚರ್ಚಿಸಿ ಪರಿಹಾರವನ್ನು ಪ್ರಕಟಿಸಲಾಗುವುದು ಎಂದು ಸಚಿವ ರಮೇಶ್‌ಕುಮಾರ್ ಅವರು ಪ್ರಕಟಿಸಿದರು.

ಎಂಡೋಸಲ್ಫಾನ್ ಸಂತ್ರಸ್ಥರ ಸಂಖ್ಯೆ ರಾಜ್ಯದಲ್ಲಿ ಸುಮಾರು 6500 ಮಂದಿ ಇರಬಹುದು ಎಂದು ಅಂದಾಜಿಸಲಾಗಿದೆ. ಒಟ್ಟು ಪರಿಹಾರದ ಪ್ಯಾಕೇಜ್ 100 ಕೋಟಿ ಆಗಬಹುದು ಎಂದು ಅಭಿಪ್ರಾಯಪಟ್ಟ ಸಚಿವರು ಎಂಡೋಸಲ್ಫಾನ್‌ನಿಂದ ವಿವಿಧ ರೀತಿಯ

ವಿಕಲಚೇತನರಾದವರಿಗಾಗಿ ಸೂಕ್ತ ಪರಿಹಾರವನ್ನು ನೀಡಲಾಗುವುದು ಎಂದು ಸಚಿವರು ತಿಳಿಸಿದರು. ಇಂಡೋಸಲ್ಫಾನ್ ಸಂತ್ರಸ್ಥರಿಗೆ ರಾಜ್ಯ ನೀಡುತ್ತಿರುವ ಸೌಲಭ್ಯ ಕೆಲವು ವಿಚಾರದಲ್ಲಿ ಕೇರಳ ರಾಜ್ಯಕ್ಕಿಂತ ಕರ್ನಾಟಕ ಮುಂದಿದೆ ಎಂದು ಸಚಿವರು ತಿಳಿಸಿದರು.

ಖಾಸಗಿ ವೈದ್ಯಕೀಯ ಶಿಕ್ಷಣಗಳ ನಿಯಂತ್ರಣ ಕುರಿತು ವಿಧಾನ ಮಂಡಲದಲ್ಲಿ ವಿಸ್ತೃತ ಚರ್ಚೆ ನಂತರ ಜಂಟಿ ಸದನ ಸಮಿತಿ ರಚಿಸಲಾಗಿದ್ದು ಜುಲೈ 6 ರಂದು ಸಮಿತಿಯ ಮೊದಲ ಸಭೆ ನಡೆಯಲಿದೆ, ಸಮಿತಿ ವರದಿ ನೀಡಲು ನಾಲ್ಕು ವಾರ ಕಾಲಾವಕಾಶ ನೀಡಿದ್ದು ಇನ್ನೂ ಒಂದು ವಾರ ಅಂದರೆ ಐದು ವಾರಗಳಲ್ಲಿ ವರದಿ ನೀಡುವುದಾಗಿ ಸಚಿವರು ತಿಳಿಸಿದರು.

ರಾಜ್ಯದ 1.30 ಕೋಟಿ ಕುಟುಂಬಗಳಿಗೆ ಎಲ್ಲರಿಗೂ ಆರೋಗ್ಯ ಸೌಲಭ್ಯ ನೀಡುವ ವಿಶಿಷ್ಟ ಆರೋಗ್ಯ ಯೋಜನೆಯ ಭೇಟಿಯನ್ನು ಬರುವ ಸಚಿವ ಸಂಪುಟದಲ್ಲಿ ಚರ್ಚಿಸಿ ಜಾರಿಗೆ ತರಲಾಗುವುದು ಎಂದು ತಿಳಿಸಿದ ಸಚಿವರು ಎಲ್ಲರಿಗೂ ಉತ್ತಮ ಆರೋಗ್ಯ ನೀಡುವ ಏಕೈಕ ಉದ್ದೇಶದಿಂದ ಇಲಾಖೆಯಲ್ಲಿ ಲಭ್ಯವಿರುವ ಹಣದಲ್ಲಿಯೇ ಸರ್ಕಾರಿ ಆಸ್ಪತ್ರೆಗಳಲ್ಲಿ ಆಧಾರ್ ಲಿಂಕ್ ಮಾಡಿ ಚಿಕಿತ್ಸೆ ಪಡೆಯುವ ಎಲ್ಲರಿಗೂ ಉಚಿತ ಔಷಧಿ ವಿತರಿಸುವ ಮಹಾತ್ವಾಕಾಂಕ್ಷಿ ಯೋಜನೆ ಇದಾಗಿದೆ ಎಂದು ಸಚಿವರು ತಿಳಿಸಿದರು.

ರಾಜ್ಯದ ಎಲ್ಲಾ ತಾಲ್ಲೂಕು ಜಿಲ್ಲಾ ಕೇಂದ್ರಗಳಲ್ಲಿ ಸಿಟಿಸ್ಕ್ಯಾನ್, ಎಕ್ಸರೇ, ಎಂ.ಐ.ಆರ್ ಸ್ಕ್ಯಾನ್ ಸೇರಿದಂತೆ ಎಲ್ಲಾ ಉಪಕರಣಗಳನ್ನು ಒಂದೇ ಒಂದೆರಡು ತಿಂಗಳಲ್ಲಿ ಅಳವಡಿಸಿ ತಜ್ಞರಿಂದ ಇದರ ಸೌಲಭ್ಯಗಳನ್ನು ಸಾರ್ವಜನಿಕರಿಗೆ ಉಚಿತವಾಗಿ ನೀಡಲಾಗುವುದು, ಅವರು ಸರ್ಕಾರದ ಎಲ್ಲಾ ಆಸ್ಪತ್ರೆಗಳಲ್ಲಿ ಈ ಸೌಲಭ್ಯಗಳನ್ನು ಒದಗಿಸಲು ಈಗಾಗಲೇ ಕ್ರಮ ಕೈಗೊಳ್ಳಲಾಗಿದೆ. ಜೊತೆಗೆ 146 ತಾಲ್ಲೂಕು ಕೇಂದ್ರಗಳಲ್ಲಿ ಡಯಾಲಿಸೀಸ್ ಘಟಕಗಳನ್ನು ಆರಂಭಿಸಲಾಗುತ್ತಿದೆ ಎಂದು ತಿಳಿಸಿದರು.

ಸರ್ಕಾರಿ ವೈದ್ಯಕೀಯ ಕಾಲೇಜುಗಳಿಲ್ಲದ ವಿಜಯಪುರ, ರಾಮನಗರ, ಕೋಲಾರ, ದಾವಣಗೆರೆ ಜಿಲ್ಲೆಗಳಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳನ್ನು ತೆರೆದು, ಉಚಿತ ಚಿಕಿತ್ಸೆ ನೀಡಲಾಗುವುದು ಎಂದು ಆರೋಗ್ಯ ಸಚಿವರು ಹೇಳಿದರು.

ರಾಜ್ಯದ ಕೇಂದ್ರ ಭಾಗಗಳಲ್ಲಿ ಡೆಂಗ್ಯೂ ಪ್ರಕರಣಗಳು ಹೆಚ್ಚಾಗಿದ್ದು ನಗರ ಸ್ಥಳೀಯ ಸಂಸ್ಥೆಗಳು ಸ್ವಚ್ಚತಾ ಕಾರ್ಯ ಕೈಗೊಳ್ಳುವಂತೆ ಸೂಚಿಸಲಾಗಿದೆ. ಪ್ರತಿ ಜಿಲ್ಲಾ ಕೇಂದ್ರಗಳಲ್ಲಿ ಪ್ಲೇಟ್‌ಲೆಟ್ ಘಟಕಗಳನ್ನು ಆರಂಭಿಸಿರುವುದಾಗಿ ತಿಳಿಸಿದ ಅವರು ಇದನ್ನು ಸದ್ಭಳಕೆ ಮಾಡಿಕೊಳ್ಳುವಂತೆ ಸಾರ್ವಜನಿಕರಲ್ಲಿ ಮನವಿ ಮಾಡಿದರು.

ತಾಲ್ಲೂಕು ಕೇಂದ್ರಗಳಲ್ಲಿ ತಜ್ಞ ವೈದ್ಯರ ಹುದ್ದೆಗಳನ್ನು ತಕ್ಷಣವೇ ಭರ್ತಿಮಾಡುವುದಾಗಿ ಸಚಿವ ರಮೇಶ್‌ಕುಮಾರ್ ಅವರು ಈ ಸಂದರ್ಭದಲ್ಲಿ ತಿಳಿಸಿದರು.

ಎಸ್‌ಎಂ:ಕೆಪಿಪಿ:ಜೆಡಿ:ಜಿಪಿಆರ್.

## ವಿವಿಧ ಹುದ್ದೆಗಳಿಗೆ ಸಂದರ್ಶನ

**ಬೆಂಗಳೂರು, ಜುಲೈ 3 (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕಸೇವಾ ಆಯೋಗವು ನೇಮಕಾತಿಗಾಗಿ ಆಯೋಗದ ಕೇಂದ್ರ ಕಚೇರಿ, ಬೆಂಗಳೂರು ಇಲ್ಲಿ ವಿವಿಧ ಹುದ್ದೆಗಳಿಗಾಗಿ ಜುಲೈ 12 ರಂದು ಬೆಳಿಗ್ಗೆ 9.30 ಗಂಟೆ ಹಾಗೂ ಮಧ್ಯಾಹ್ನ 2.30 ಗಂಟೆಗೆ ಸಂದರ್ಶನವನ್ನು ಹಮ್ಮಿಕೊಂಡಿದೆ

ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯಲ್ಲಿ ಸಹಾಯಕ ಅಭಿಯಂತರರು, (ಸಿವಿಲ್) ಹುದ್ದೆ, ಕರ್ನಾಟಕ ಗೃಹ ಮಂಡಳಿಯಲ್ಲಿ ಸಹಾಯಕ ಅಭಿಯಂತರರು, (ಸಿವಿಲ್) ಹುದ್ದೆ, ಕೃಷಿ ಮಾರಾಟ ಇಲಾಖೆಯಲ್ಲಿ ಸಹಾಯಕ ಅಭಿಯಂತರರು (ಹ್ಯ. ಕ) ಹುದ್ದೆ ಹಾಗೂ ಪೊಲೀಸ್ ಇಲಾಖೆಯ ನ್ಯಾಯ ವಿಜ್ಞಾನ ಪ್ರಯೋಗಾಲಯಗಳಲ್ಲಿ ವೈಜ್ಞಾನಿಕ ಅಧಿಕಾರಿ (ಮನೋವಿಜ್ಞಾನ ವಿಭಾಗ) ಹುದ್ದೆಗಳಿಗಾಗಿ ಸಂದರ್ಶನ ನಡೆಯಲಿದೆ.

ಅರ್ಹ ಅಭ್ಯರ್ಥಿಗಳಿಗೆ ಸಂದರ್ಶನ ಸೂಚನಾಪತ್ರಗಳನ್ನು ಈಗಾಗಲೇ ಕಳುಹಿಸಲಾಗಿದೆ. ಸಂದರ್ಶನಕ್ಕೆ ಅರ್ಹರಾದ / ತಿರಸ್ಕೃತ ಅಭ್ಯರ್ಥಿಗಳ ಪಟ್ಟಿಗಳನ್ನು ಮಾಹಿತಿಗಾಗಿ ಆಯೋಗದ ವೆಬ್‌ಸೈಟ್ "http://kpsc.kar.nic.in/Eligibility List/Rejected List" ಗಳಲ್ಲಿ ಪ್ರಕಟಿಸಲಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

## ರಾಷ್ಟ್ರೀಯ ಇಂಡಿಯನ್ ಮಿಲಿಟರಿ ಕಾಲೇಜ್ – ಎಂಟನೇ ತರಗತಿ ಪ್ರವೇಶ ಪರೀಕ್ಷೆಗೆ ಅರ್ಜಿ ಆಹ್ವಾನ

**ಬೆಂಗಳೂರು, ಜುಲೈ 3 (ಕರ್ನಾಟಕ ವಾರ್ತೆ)**

**ಉತ್ತರಾಖಂಡ ರಾಜ್ಯದ ಡೆಹರಾಡೂನ್‌ಲ್ಲಿರುವ ರಾಷ್ಟ್ರೀಯ ಇಂಡಿಯನ್ ಮಿಲಿಟರಿ ಕಾಲೇಜ್, ಇಲ್ಲಿ 8ನೇ ತರಗತಿ ಪ್ರವೇಶ ಬಯಸುವ ಕರ್ನಾಟಕ ರಾಜ್ಯದ ಬಾಲಕರಿಗೆ ಅರ್ಹತಾ ಪ್ರವೇಶ ಪರೀಕ್ಷೆಯನ್ನು ಬೆಂಗಳೂರು ಕೇಂದ್ರ 2017 ರ ಡಿಸೆಂಬರ್ 1 ಮತ್ತು 2 ರಂದು ನಡೆಸಲಾಗುವುದು.**

**ಸರ್ಕಾರದಿಂದ ಮಾನ್ಯತೆ ಪಡೆದಿರುವ ಶಾಲೆಯಲ್ಲಿ 7 ನೇ ತರಗತಿಯಲ್ಲಿ ಒದುತ್ತಿರುವ ಅಥವಾ ಉತ್ತೀರ್ಣರಾಗಿರುವ ಹಾಗೂ ದಿನಾಂಕ: 01–07–2018 ರಂತೆ ಹನ್ನೊಂದುವರೆ**

ವರ್ಷದಿಂದ 13 ವರ್ಷದೊಳಗಿರುವ (ಅಂದರೆ ದಿನಾಂಕ 02–07–2005 ರಿಂದ 01–01–2007 ರೊಳಗೆ ಜನಿಸಿರುವ) ಬಾಲಕರು ಮಾತ್ರ ಸದರಿ ಪ್ರವೇಶ ಪರೀಕ್ಷೆಗೆ ಅರ್ಹರಿರುತ್ತಾರೆ. ಈ ಸಂಸ್ಥೆಯ ಮುಖ್ಯ ಗುರಿ ಯುವಕರನ್ನು ದೇಶದ ಸಶಸ್ತ್ರ ಪಡೆಗೆ ಸೇರಲು ಸಿದ್ಧಗೊಳಿಸುವುದು ಹಾಗೂ ಈ ನಿಟ್ಟಿನಲ್ಲಿ ಯುವಕರಿಗೆ ಸರ್ವ ರೀತಿಯ ವಿದ್ಯಾಭ್ಯಾಸ/ತರಬೇತಿ ನೀಡುವುದು. ಕಾಲೇಜಿನಲ್ಲಿ ವರ್ಷವೊಂದಕ್ಕೆ ಪ್ರಸಕ್ತ ವಿದ್ಯಾಭ್ಯಾಸ ಶುಲ್ಕ ರೂ. 42,400/– ಆಗಿರುತ್ತದೆ.

ವಿವರಣ ಪತ್ರ ಹಾಗೂ ಹಳೇ ಪ್ರಶ್ನೆ ಪತ್ರಿಕೆಗಳನ್ನೊಳಗೊಂಡ ಅರ್ಜಿ ನಮೂನೆಯನ್ನು ಕೋರಿಕೆ ಪತ್ರದ ಮೇರೆಗೆ ನಿರ್ದೇಶಕರು, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಭವನ, ನಂ 58, ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ರಸ್ತೆ, ಬೆಂಗಳೂರು – 560 025 ಇಲ್ಲಿಂದ (THE COMMANDANT RIMC DEHRADUN" PAYABLE AT SBI, TEL BHAVAN, DEHRADUN (BANK CODE NO 01576) ಇವರ ಹೆಸರಿನಲ್ಲಿ ಪಡೆದ ರೂ. 600/– (ಸಾಮಾನ್ಯ ಅಭ್ಯರ್ಥಿಗಳಿಗೆ) ಮತ್ತು ರೂ. 555 ರೂ. (ಎಸ್‌ಸಿ/ಎಸ್‌ಟಿ ಅಭ್ಯರ್ಥಿಗಳಿಗೆ) ಡಿಮಾಂಡ್ ಡ್ರಾಪ್ಟ್ ಮೂಲಕ ಖುದ್ದಾಗಿ ಪಡೆಯಬಹುದಾಗಿದೆ. ರಿಜಿಸ್ಟರ್ಡ್ ಪಾರ್ಸಲ್ ಮೂಲಕ ಅರ್ಜಿ ನಮೂನೆಗಳನ್ನು ಪಡೆಯಲಿಚ್ಚಿಸಲಿರುವ ಅಭ್ಯರ್ಥಿಗಳು ಮೇಲೆ ತಿಳಿಸಿದ ಬ್ಯಾಂಕ್ ಡ್ರಾಪ್ಟ್‌ನೊಂದಿಗೆ 11 " x 9" ಅಳತೆ ಸೈಜಿನ ಸ್ವವಿಳಾಸದ ಲಕೋಟೆಯ ಮೇಲೆ ರೂ. 40/– ಮೌಲ್ಯದ ಅಂಚೆ ಚೀಟಿ ಲಗತ್ತಿಸಿ ಕಳುಹಿಸತಕ್ಕದು. ಲಕೋಟೆಯ ಮೇಲೆ ಅಭ್ಯರ್ಥಿಯ ಪೂರ್ಣ ಅಂಚೆ ವಿಳಾಸ ಮತ್ತು ದೂರವಾಣಿ ಸಂಖ್ಯೆಯನ್ನು ಸ್ಪಷ್ಟವಾಗಿ ನಮೂದಿಸಬೇಕು.

ಭರ್ತಿಮಾಡಿದ ನಿಗದಿತ ಅರ್ಜಿ ನಮೂನೆಯನ್ನು ದ್ವಿಪ್ರತಿಯಲ್ಲಿ ಕೆಳಗಿನ ಅಡಕಗಳೊಂದಿಗೆ ದಿನಾಂಕ: 30–09–2017 ರೊಳಗಾಗಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಭವನ, ನಂ 58, ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ರಸ್ತೆ, ಬೆಂಗಳೂರು – 560 025 ಇವರಿಗೆ ಸಲ್ಲಿಸಬೇಕು.

ಮುನ್ಸಿಪಾಲಿಟಿ/ಗ್ರಾಮ ಪಂಚಾಯತ್ ಪ್ರಾಧಿಕಾರ ವತಿಯಿಂದ ಆಂಗ್ಲ ಭಾಷೆಯಲ್ಲಿ ಪಡೆದ ಅಭ್ಯರ್ಥಿಯ ಜನ್ಮ ಪ್ರಮಾಣ ಪತ್ರದ ದೃಢೀಕೃತ ಪ್ರತಿ, 5 ಪಾಸ್‌ಪೋರ್ಟ್ ಸೈಜಿನ ಭಾವಚಿತ್ರಗಳು (ಅರ್ಜಿಗಳಲ್ಲಿ ಅಂಟಿಸಿದ ಭಾವಚಿತ್ರವನ್ನು ಸೇರಿಸಿ). ಎಸ್‌ಸಿ/ಎಸ್‌ಟಿ ಅಭ್ಯರ್ಥಿಗಳಾಗಿದ್ದಲ್ಲಿ, ಸಕ್ಷಮ ಪ್ರಾಧಿಕಾರಿದಂದ ನೀಡಿದ ಜಾತಿ ಪ್ರಮಾಣ ಪತ್ರದ ದೃಢೀಕೃತ ಪ್ರತಿ (ಆಂಗ್ಲ ಭಾಷೆಯಲ್ಲಿ ಇರುವಂತೆ ಮಾತ್ರ) ಪರೀಕ್ಷಾ ಪ್ರವೇಶ ಪತ್ರವನ್ನು ತ್ವರಿತ/ನೊಂದಾಯಿತ ಅಂಚೆದ್ವಾರ ರವಾನಿಸಲು ರೂ. 40/– ರ ಅಂಚೆಚೀಟಿ ಅಂಟಿಸಿದ ಸ್ವವಿಳಾಸ ಲಕೋಟೆ, ಶಾಲಾ ಪ್ರಾಚಾರ್ಯರು/ಮುಖ್ಯೋಪಾಧ್ಯಾಯರಿಂದ ಅಭ್ಯರ್ಥಿಯ ಜನ್ಮ ದಿನಾಂಕ ಮತ್ತು ಓದುತ್ತಿರುವ

ತರಗತಿ ಬಗ್ಗೆ ಪಡೆದ ಪ್ರಮಾಣ ಪತ್ರದ ಮೂಲ ಪ್ರತಿ (ದೃಢೀಕರಿಸಿದ ಅಭ್ಯರ್ಥಿಯ ಭಾವಚಿತ್ರದೊಂದಿಗೆ), ರಾಜ್ಯದ ವಾಸಸ್ಥಾನ ದೃಢೀಕರಣ ಪತ್ರ (ತಹಸೀಲ್ದಾರರಿಂದ)

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 080 – 25589459 ಅಥವಾ ಸಮೀಪದಲ್ಲಿರುವ ತಮ್ಮ ಜಿಲ್ಲಾ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ ಎಂದು ಸೈನಿಕ ಕಲ್ಯಾಣ ಪುನರ್ವಸತಿ ಇಲಾಖೆ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

## ನೇಮಕಾತಿ

ಬೆಂಗಳೂರು, ಜುಲೈ 3 (ಕರ್ನಾಟಕ ವಾರ್ತೆ)

ರಾಯಚೂರಿನ ಕರ್ನಾಟಕ ರಾಜ್ಯ ಕೃಷಿ ವಿಜ್ಞಾನ ವಿಶ್ವವಿದ್ಯಾಲಯದ 'ನಿರ್ವಹಣಾ ಮಂಡಳಿಯ' ಸದಸ್ಯರನ್ನಾಗಿ ಹುಮ್ನಾಬಾದ್‌ನ ವಿಧಾನಸಭೆಯ ಸದಸ್ಯ ರಾಜಶೇಖರ್ ಬಸವರಾಜ್ ಪಾಟೀಲ್ ಅವರನ್ನು ನೇಮಿಸಿ, ರಾಜ್ಯಪಾಲರು ಆದೇಶ ಹೊರಡಿಸಿದ್ದಾರೆ.

ಎಸ್‌ಎಂ:ಜೆಡಿ:ಜಿಪಿಆರ್.

## ಅರ್ಹ ಅಭ್ಯರ್ಥಿಗಳ ಮೂಲ ದಾಖಲಾತಿ ಪರಿಶೀಲನೆ

ಬೆಂಗಳೂರು, ಜುಲೈ 3 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗದ ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯಲ್ಲಿನ ಸಹಾಯಕ ನಿಯಂತ್ರಕರು (ಗ್ರೂಪ್-ಎ) ಮತ್ತು ಲೆಕ್ಕಪರಿಶೋಧನಾಧಿಕಾರಿ (ಗ್ರೂಪ್-ಬಿ) ವೃಂದ್ದ ಒಟ್ಟು 162 ಹುದ್ದೆಗಳ ಸಂದಶನಕ್ಕೆ 1:3 ಅನುಪಾತದಲ್ಲಿ ಅರ್ಹತೆ ಪಡೆದ ಅಭ್ಯರ್ಥಿಗಳ ಪಟ್ಟಿಯನ್ನು ಆಯೋಗದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದ್ದು, ಮೂಲ ದಾಖಲಾತಿ ಪರಿಶೀಲನೆಯನ್ನು ಜುಲೈ 12 ಮತ್ತು 13 ರಂದು ನಡೆಸಲಾಗುತ್ತದೆ.

ಅರ್ಹ ಅಭ್ಯರ್ಥಿಗಳಿಗೆ ಸೂಚನಾ ಪತ್ರವನ್ನು ಪ್ರತ್ಯೇಕವಾಗಿ ರವಾನಿಸಲಾಗಿದ್ದು, ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನೆಗಾಗಿ ಆಯೋಗದ ಕೇಂದ್ರ ಕಚೇರಿ, ಉದ್ಯೋಗಸೌಧ, ಬೆಂಗಳೂರು ಇಲ್ಲಿ ಅಂದು ತಪ್ಪದೇ ಹಾಜರಾಗಬೇಕು.

ಅರ್ಹ ಅಭ್ಯರ್ಥಿಗಳಿಗೆ ಸೂಚನಾ ಪತ್ರ ಸ್ವೀಕೃತವಾಗದಿದ್ದಲ್ಲಿ ಸಂಬಂಧಿತ ದಾಖಲೆಗಳೊಂದಿಗೆ ಕೇಂದ್ರ ಕಚೇರಿಯನ್ನು ಮೂಲ ದಾಖಲೆಗಳ ಪರಿಶೀಲನೆಗೆ ನಿಗದಿಪಡಿಸಿರುವ ದಿನಾಂಕದೊಳಗೆ ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

# ಲಂಡನ್ ಬಸವೇಶ್ವರ ಪ್ರತಿಮೆಗೆ ಮಾಲಾರ್ಪಣೆ

**ಬೆಂಗಳೂರು, ಜುಲೈ 3 (ಕರ್ನಾಟಕ ವಾರ್ತೆ)**

ಲಂಡನ್‌ನಲ್ಲಿರುವ ಬಸವೇಶ್ವರ ಸಂಘದ ಆಹ್ವಾನದ ಮೇರೆಗೆ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ ಅವರು ಅಲ್ಲಿಗೆ ತೆರಳಿ ಜುಲೈ 1 ರಂದು ಬಸವೇಶ್ವರ ಪ್ರತಿಮೆಗೆ ಗೌರವ ಸಲ್ಲಿಸಿ ಮಾಲಾರ್ಪಣೆ ಮಾಡಿದ್ದಾರೆ.

ಲಂಡನ್ ಮಾಜಿ ಮೇಯರ್ ಲಂಬೆತ್ ಡಿ ನೀರಜ್ ಪಾಟೀಲ್ ಅವರ ಆಹ್ವಾನದ ಮೇರೆಗೆ ಸಚಿವರು ತೆರಳಿದ್ದರು. ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು 14ನೇ ನವೆಂಬರ್ 2015 ರಲ್ಲಿ ಈ ಪ್ರತಿಮೆಯನ್ನು ಅನಾವರಣ ಮಾಡಿದ್ದರು. ಬ್ರಿಟನ್ ದೇಶದ ಸಂಸತ್ತು ಬಸವಣ್ಣನವರ ಪ್ರತಿಮೆಯನ್ನು ಸ್ಥಾಪಿಸಲು ಅನುಮತಿ ನೀಡಿತ್ತು.